ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಸೋಮವಾರ, ದಿನಾಂಕ : 22ನೇ ಜುಲೈ, 2019

ರಾಜ್ಯದ ಪ್ರವಾಸೋದ್ಯಮ ಇಲಾಖೆ ವ್ಯಾಪ್ತಿಯ ಪ್ರವಾಸಿ ತಾಣಗಳ ಬಗ್ಗೆ

ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ ( ನಾಮ ನಿರ್ದೇಶನ ಹೊಂದಿದವರು):-

465 (477) ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಪ್ರವಾಸೋದ್ಯಮ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಪ್ರವಾಸಿ ತಾಣಗಳಾವುವು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ 3 ವರ್ಷಗಳಲ್ಲಿ ಪ್ರವಾಸೋದ್ಯಮ ಇಲಾಖೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನದ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಕಳೆದ 3 ವರ್ಷಗಳಲ್ಲಿ ಈ ಪ್ರವಾಸಿ ತಾಣಗಳ ಅಭಿವೃದ್ಧಿಗಾಗಿ ಬಿಡುಗಡೆ ಮಾಡಿದ ಅನುದಾನವೆಷ್ಟು ; (ತಾಲ್ಲೂಕುವಾರು,

ಪ್ರವಾಸಿತಾಣವಾರು ಮಾಹಿತಿ ನೀಡುವುದು)

(ಈ) ಈ ಪ್ರವಾಸಿ ತಾಣವನ್ನು ಪ್ರಚಾರ ಪಡಿಸಲು ಸರ್ಕಾರ ರೂಪಿಸಿರುವ ಯೋಜನೆಗಳಾವುವು ; (ತಾಲ್ಲೂಕುವಾರು, ಪ್ರವಾಸಿತಾಣವಾರು ಮಾಹಿತಿ ನೀಡುವುದು)

(ಉ) ಹೈದ್ರಾಬಾದ್ ಕರ್ನಾಟಕ ಪ್ರದೇಶಕ್ಕೆ 371(ಜೆ) ಅನ್ವಯ ವಿಶೇಷ ಸ್ಥಾನಮಾನ ನೀಡಿದ ನಂತರ ಈ ವ್ಯಾಪ್ತಿಯ ಎಷ್ಟು ಪ್ರವಾಸಿ

ತಾಣಗಳಿಗೆ ವಿಶೇಷ ಅನುದಾನವನ್ನು ಬಿಡುಗಡೆ ಮಾಡಲಾಗಿದೆಯೇ; (ತಾಲ್ಲೂಕುವಾರು, ಪ್ರವಾಸಿತಾಣವಾರು ಮಾಹಿತಿ ನೀಡುವುದು)